ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ,
ದಕ್ಷಿಣ ಕನ್ನಡ ಜಿಲ್ಲೆ,
ಮಂಗಳೂರು – 575 001.

ಕರ್ನಾಟಕ ಸರಕಾರ
(ಕಂದಾಯ ಇಲಾಖೆ)

Deputy Commissioner &
District Magistrate's Office,
Dakshina Kannada District,
Mangaluru – 575 001.

ನಂ. ಸಿಎಎಲ್.ಸಿಆರ್ 144/2021/138463/ಬಿ2

ದಿನಾಂಕ: 27-05-2021

## ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರ ನಡವಳಿ

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋವಿಡ್ - 19 (ಕೊರೊನಾ ವೈರಾಣು ಕಾಯಿಲೆ - 2019) ಸೋಂಕು ಪ್ರಸರಣದ ಸರಪಳಿಯನ್ನು ತುಂಡರಿಸುವ ಸಲುವಾಗಿ ಸರ್ಕಾರದ ನಿರ್ದೇಶನದಂತೆ ಜಿಲ್ಲಾಡಳಿತದ ವತಿಯಿಂದ ಕಾಲಕಾಲಕ್ಕೆ ಎಲ್ಲಾ ಮುಂಜಾಗೃತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಜಿಲ್ಲೆಯಲ್ಲಿ ಕೋವಿಡ್ -19 ಸೋಂಕು ಪ್ರಸರಣದ ಸರಪಳಿಯನ್ನು ತುಂಡರಿಸಲು ಜನಸಂದಣಿಯುಂಟಾಗದಂತೆ ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸೇರುವುದನ್ನು ತಡೆಯುವುದು ಅತ್ಯವಶ್ಯಕವಾಗಿದ್ದು, ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಜಿಲ್ಲೆಯಾದ್ಯಂತ ಅವಶ್ಯಕ ಚಟುವಟಿಕೆಗಳನ್ನು ಹೊರತುಪಡಿಸಿ ಇತರೆ ಉದ್ದೇಶಗಳಿಗೆ ಸಾರ್ವಜನಿಕರ ಸಂಚಾರವನ್ನು ನಿರ್ಬಂಧಿಸಲಾಗಿರುತ್ತದೆ.

ಈ ಸಂದರ್ಭದಲ್ಲಿ ಯಾವುದೇ ಮೈಕ್ರೋ ಫೈನಾನ್ಸ್ ಗಳು / ಸಹಕಾರಿ ಸಂಘಗಳು / ಇತರೆ ಹಣಕಾಸು ಸಂಸ್ಥೆಗಳು ಸಾಲಗಾರರಿಗೆ ಸಾಲಮರುಪಾವತಿ ಮಾಡಲು ಒತ್ತಡ ಹೇರುವಂತಿಲ್ಲ. ಅದಾಗ್ಯೂ ಸಾಲ ಮರುಪಾವತಿ ಮಾಡಲು ಒತ್ತಡ ಹೇರಿದ್ದಲ್ಲಿ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಿ ಸೂಕ್ತ ಕ್ರಮ ಕೈಗೊಳ್ಳಲು ಈ ಕೆಳಕಂಡ ನೋಡಲ್ ಅಧಿಕಾರಿಯವರನ್ನು ನೇಮಿಸಿ ಆದೇಶಿಸಲಾಗಿದೆ.

| ಕ್ರ.ಸಂ. | ಕಾರ್ಯ ವ್ಯಾಪ್ತಿ | ಹೆಸರು / ಪದನಾಮ | ಮೊಬೈಲ್ ಸಂ. |
|---|---|---|---|
| 1. | ಇತರೆ ಹಣಕಾಸು ಸಂಸ್ಥೆಗಳು | ಶ್ರೀ ಪ್ರವೀಣ್,<br>ಲೀಡ್ ಡಿಸ್ಟ್ರಿಕ್ಟ್ ಮ್ಯಾನೇಜರ್,<br>ದ.ಕ., ಮಂಗಳೂರು | 9449860916 |
| 2. | ಮೈಕ್ರೋ ಫೈನಾನ್ಸ್ ಗಳು / ಸಹಕಾರಿ ಸಂಘಗಳು | ಶ್ರೀ ಪ್ರವೀಣ್ ಬಿ.ನಾಯಕ್,<br>ಸಹಕಾರ ಸಂಘಗಳ ಉಪನಿಬಂಧಕರು,<br>ದ.ಕ., ಮಂಗಳೂರು | 9448633338 |

ಮೇಲಿನ ನೋಡಲ್ ಅಧಿಕಾರಿಗಳು ಸಾರ್ವಜನಿಕರಿಂದ ಸ್ವೀಕೃತವಾಗುವ ಸಾಲ ಮರುಪಾವತಿ ಕುರಿತ ದೂರುಗಳಿಗೆ ತಕ್ಷಣವೇ ಸ್ಪಂದಿಸುವುದು. ಮೈಕ್ರೋ ಫೈನಾನ್ಸ್ ಗಳು / ಸಹಕಾರಿ ಸಂಘಗಳು / ಇತರೆ ಹಣಕಾಸು ಸಂಸ್ಥೆಗಳು ಹಾಗೂ ಸಾರ್ವಜನಿಕರ ಮಧ್ಯೆ ಸಮನ್ವಯತೆಯಿಂದ ಯಾವುದೇ ಗೊಂದಲ/ಸಂಘರ್ಷವುಂಟಾಗದಂತೆ ಸಾರ್ವಜನಿಕರ ಸಮಸ್ಯೆಗಳಿಗೆ ಪರಿಹಾರ ನೀಡುವುದು.

ಜಿಲ್ಲಾಧಿಕಾರಿ
ಹಾಗೂ ಅಧ್ಯಕ್ಷರು,
ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ರಿಗೆ : ಸಂಬಂಧಪಟ್ಟ ಅಧಿಕಾರಿಗಳಿಗೆ

Scanned with CamScanner